ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 8-5-2017

# ಪತ್ರಿಕಾ ಆಮಂತ್ರಣ

1. **Capacity Building of India Textile and Clothing Industry organised by Textile Committee, Union Ministry of Textiles**

   **Date: 9-5-2017 Tuesday, 2017 Time: 11.00**
   **Venue: The Lalit Ashok, Kumarakrupa High Grounds, Bengaluru**

2. **"Road Show" organised by Central Silk Board, Union Ministry of Textiles,**
   **Date: 9-5-2017 Tuesday, 10.00 a.m. to 11.00 a.m.**
   **Venue: The Silk Board Junction, BTM Layout, Madiwala, Bengaluru -68**

3. **Valedictory function of XXII International Astronomy Olympiad Orientation cum Selection Camp Organised by Visvesvaraya Industrial & Technical Museum**
   **Date: 9-5-2017 Tuesday 11-30 a.m.**
   **Venue: Conference Hall, Visvesvaraya Industrial and Technical Museum, Kasturba Road, Bengaluru-1**

# ಪತ್ರಿಕಾ ಪ್ರಕಟಣೆ

## ಅಪರೂಪದ ಮದುವೆಗೆ ಸಾಕ್ಷಿಯಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)

ಬಾಲಕಾರ್ಮಿಕ ಪದ್ದತಿಯ ಶೋಷಣೆಗೊಳಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಸ್ವೀಕಾರ ಕೇಂದ್ರದಲ್ಲಿ ಆಶ್ರಯ ಪಡೆದಿದ್ದ ವಧು ಕು.ಚೈತ್ರಾ ಕೆ.ಎಸ್ ಮತ್ತು ಅನಾಥೆಗೆ ಬಾಳು ಕೊಡಬೇಕೆಂಬ ದೃಢ ಸಂಕಲ್ಪ ಕೈಗೊಂಡಿದ್ದಂತಹ ವರ ರೂಪೇಶಕುಮಾರ ಕೆ.ಸಿ ಇವರ ವಿವಾಹ ಇಂದು ಬೆಂಗಳೂರಿನ ಹೊಸೂರು ರಸ್ತೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಸ್ವೀಕಾರ ಕೇಂದ್ರದ ಆವರಣದಲ್ಲಿರುವ ಗಣಪತಿ ದೇವಾಲಯದಲ್ಲಿ ಇಲಾಖೆಯ ಅಧಿಕಾರಿ, ಸಿಬ್ಬಂದಿ ವರ್ಗ ಮತ್ತು ವರನ ಬಂಧುಬಳಗದ ಸಮ್ಮುಖದಲ್ಲಿ ಸಾಂಪ್ರದಾಯಿಕವಾಗಿ ನೆರವೇರಿತು.

ಇಲಾಖೆಯ ಉಪನಿರ್ದೇಶಕಿ ರತ್ನಾ ಬಿ. ಕಲಮದಾನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಅಧಿಕಾರಿ ಗೀತಾ ಪಾಟೀಲ್ ಮತ್ತು ಸ್ವೀಕಾರ ಕೇಂದ್ರದ ಅಧೀಕ್ಷಕಿ ಪುಟ್ಟರತ್ನ ಜಿ ಸೇರಿದಂತೆ ವರನ ತಂದೆ, ತಾಯಿ ಬಂಧು ಬಳಗ, ಸ್ವೀಕಾರ ಕೇಂದ್ರದ ಸಿಬ್ಬಂದಿಗಳೂ ಸೇರಿದಂತೆ ಸುಮಾರು ನೂರು ಮಂದಿ ಈ ಅಪರೂಪದ ಮದುವೆಗೆ ಸಾಕ್ಷಿಯಾದರು.

ಹಿನ್ನಲೆ: ಬೆಂಗಳೂರಿನಲ್ಲಿ ಖಾಸಗಿ ಸಂಸ್ಥೆಯಲ್ಲಿ ನೌಕರಿಯಲ್ಲಿರುವ ಮತ್ತು ಸ್ವಂತ ಮನೆಯನ್ನೂ ಸಹ ಹೊಂದಿರುವ ರೂಪೇಶ್ ಕುಮಾರ್ ಅವರಿಗೆ ಬಹಳ ಹಿಂದಿನಿಂದಲೂ ಓರ್ವ ಅನಾಥೆಗೆ ಬಾಳು ಕೊಡಬೇಕೆಂಬ ಬಲವಾದ ಇಚ್ಚೆ ಇತ್ತು. ಅಂತೆಯೇ ತಮ್ಮ ಮನದ ಇಂಗಿತವನ್ನು ತಮ್ಮ ಪೋಷಕರ ಮುಂದೆ ತೋಡಿಕೊಂಡಿದ್ದರು. ಮಗನ ಮನದಾಸೆಯನ್ನು ಅರ್ಥ ಮಾಡಿಕೊಂಡ ಪೋಷಕರು ಕಿಂಚಿತ್ತೂ ವಿರೋಧ ವ್ಯಕ್ತಪಡಿಸದೆ ತಮ್ಮ ಮಗನ ಮನೋಭಿಲಾಷೆಯನ್ನು ಸಾಕಾರಗೊಳಿಸಲು ನಿರ್ಧರಿಸಿದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಸ್ವೀಕಾರ ಕೇಂದ್ರದಲ್ಲಿರುವ ತಮ್ಮ ಸಂಬಂಧಿಕರೊಬ್ಬರಿಗೆ ಈ ವಿಚಾರವನ್ನು ತಿಳಿಸಿದ್ದರು. ಅದರಂತೆ ಒಂದು ದಿನ ಸ್ವೀಕಾರ ಕೇಂದ್ರಕ್ಕೆ ಭೇಟಿ ನೀಡಿ ಕು. ಚೈತ್ರಳನ್ನು ನೋಡಿದ್ದರು. ಬಲಕಾರ್ಮಿಕ ಪದ್ದತಿಯ ಶೋಷಣೆಗೊಳಪಟ್ಟು ತಾನು ಕೆಲಸ ಮಾಡುತ್ತಿದ್ದ ಮನೆಯಿಂದ ತಪ್ಪಿಸಿಕೊಂಡು ಹೊರಬಂದು ಸಾರ್ವಜನಿಕರು, ಪೊಲೀಸರ ಮುಖಾಂತರ ಬಾಲಕಿಯರ ಬಾಲ ಮಂದಿರಕ್ಕೆ, ತದನಂತರ ಸ್ವೀಕಾರ ಕೇಂದ್ರಕ್ಕೆ ದಾಖಲೆಗೊಂಡಿದ್ದ ಕು. ಚೈತ್ರಳನ್ನು ರೂಪೇಶ್ ಕುಮಾರ್ ಅವರು ಒಪ್ಪಿದ್ದರು. ಪರಸ್ಪರ ಇಬ್ಬರೂ ಒಪ್ಪಿಗೆ ವ್ಯಕ್ತಪಡಿಸಿದ ನಂತರ ಕಾನೂನಾತ್ಮಕ ಪ್ರಕ್ರಿಯೆ ಪೂರ್ಣಗೊಂಡು ವಿವಾಹ ಏರ್ಪಡಿಸಲಾಗುತ್ತದೆ.

'ಹದಿನೆಂಟು ವರ್ಷ ಪೂರ್ತಿಗೊಳಿಸಿ ಆರೋಗ್ಯವಂತಳಾದ ಕು.ಚೈತ್ರಗಳಿಗೆ ನಿಯಮಾನುಸಾರ ವಿವಾಹ ಮಾಡಲು ನಿಶ್ಚಯಿಸಿ ವರಾನ್ವೇಷಣೆ ನಡೆಸಿದ್ದು ಅದರಂತೆ ಈ ಸಂಸ್ಥೆಗೆ ರೂಪೇಶ್ ಕುಮಾರ್ ಎಂಬುವರು ಅವರ ತಂದೆ ತಾಯಿ ಜೊತೆ ಈ ಸಂಸ್ಥೆಗೆ ಬಂದು ಕು.ಚೈತ್ರಳನ್ನು ನೋಡಿ ಮದುವೆಯಾಗಲು ಸಮ್ಮತಿ ನೀಡಿರುತ್ತಾರೆ. ಸರ್ಕಾರದ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸಿ ಸರ್ಕಾರದ ಅನುಮತಿ ಪಡೆದು ಈ ವಿವಾಹ ನಡೆಸಲಾಗಿದೆ ಎಂದು ಸ್ವೀಕಾರ ಕೇಂದ್ರದ ಅಧೀಕ್ಷಕಿ ಪುಟ್ಟರತ್ನ ಅವರು ತಿಳಿಸಿದರು.

ನಿಯಮನುಸಾರ ಸರ್ಕಾರ ನೀಡುವ ಇಪ್ಪತ್ತು ಸಾವಿರ ಅನುದಾನದಲ್ಲಿ ಹದಿನೈದು ಸಾವಿರ ರೂ.ಗಳನ್ನು ನೂತನ ದಂಪತಿಗಳಿಬ್ಬರ ಹೆಸರಿನಲ್ಲಿ ಫಿಕ್ಸೆಡ್ ಡೆಪಾಸಿಟ್ ಇಡಲಿದ್ದು, ಉಳಿದ ಐದು ಸಾವಿರದಲ್ಲಿ ವಿವಾಹದ ಖರ್ಚುವೆಚ್ಚ ನೋಡಿಕೊಳ್ಳಲಾಗುವುದು. ಸಾಂಪ್ರದಾಯಿಕ ಮದುವೆಯ ನಂತರ ವಿವಾಹ ನೋಂದಣಾಧಿಕಾರಿ ಕಚೇರಿಯಲ್ಲಿ ವಿವಾಹವನ್ನು ನೋಂದಣಿ ಮಾಡಿಸಲಾಗುವುದು ಎಂದು ಅವರು ತಿಳಿಸಿದರು.

ವಿವಾಹವಾಗಲು ಅಪೇಕ್ಷಿಸಿ ಬರುವ ವರನ ಸಂಪೂರ್ಣ ವಿವರವನ್ನು ಮೊದಲಿಗೆ ಕಲೆ ಹಾಕಲಾಗುತ್ತದೆ. ವರ ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಾಗಿದ್ದು. ತಾವು ವಿವಾಹವಾಗುವ ಹುಡುಗಿಯನ್ನು ಸಾಕಲು ಆರ್ಥಿಕವಾಗಿ ಸಬಲರಾಗಿರಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಯಾವುದೇ ಅಪರಾಧ ಹಿನ್ನಲೆಯುಳ್ಳವನಾಗಿರಬಾರದು ಮತ್ತು ಈ ಕುರಿಂತಂತೆ ಪೊಲೀಸ್ ಇಲಾಖೆಯಿಂದ ಪ್ರಮಾಣ ಪತ್ರ ತರಬೇಕು. ಈ ಎಲ್ಲ ಪ್ರಕ್ರಿಯೆ ಪೂರ್ಣಗೊಂಡ ನಂತರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಅನುಮತಿ ಪಡೆಯಲಾಗುತ್ತದೆ. ಒಪ್ಪಿಗೆ ದೊರೆತ ನಂತರ ಉಳಿದಂತೆ ವಿವಾಹ ಪ್ರಕ್ರಿಯೆ ಎಂದು ಅವರು ವಿವರಿಸಿದರು.

ಇದುವರೆಗೆ ಸ್ವೀಕಾರ ಕೇಂದ್ರದಲ್ಲಿ ನಾಲ್ಕು ವಿವಾಹಗಳು ನಡೆದಿದ್ದು, ಚೈತ್ರ ಮತ್ತು ರೂಪೇಶ್‌ಕುಮಾರ್ ಅವರದ್ದು ಈ ಸಾಲಿನ ಮೊದಲ ಮದುವೆ. ಸ್ವೀಕಾರ ಕೇಂದ್ರದ ಮತ್ತಿಬ್ಬರು ಯೋಗ್ಯ ಹುಡುಗಿಯರಿಗೆ ಸಧ್ಯದಲ್ಲೇ ಕಂಕಣಬಲ ಕೂಡಿಬರಲಿದ್ದು, ಈ ನಿಟ್ಟಿನಲ್ಲಿ ಸರ್ಕಾರದ ನಿಯಮಾನುಸಾರ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

ಎಸ್‌ಎಂ/ಮಮತ

## ದಿಡ್ಡಳ್ಳಿ ಸಂತ್ರಸ್ತರಿಗೆ ಪರ್ಯಾಯ ಪುನರ್ವಸತಿ ಕಲ್ಪಿಸಲಾಗಿದೆ – ಎಂ.ಆರ್. ಸೀತಾರಾಂ

**ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)**

ಕೊಡಗು ಜಿಲ್ಲೆಯ ದಿಡ್ಡಹಳ್ಳಿ ಸಂತ್ರಸ್ತರ ಪುನರ್‌ವಸತಿಗೆ ಸಂಬಂಧಿಸಿದಂತೆ ಸರ್ಕಾರ ಪರ್ಯಾಯ ವ್ಯವಸ್ಥೆ ಕಲ್ಪಿಸಿದ್ದು ಈಗಾಗಲೇ 700 ಮಂದಿಗೆ ವಸತಿ ನೀಡಲು ಸಿದ್ಧತೆ ನಡೆಸಿದೆ ಎಂದು ಯೋಜನೆ, ಸಾಂಖ್ಯಿಕ ಮತ್ತು ವಿಜ್ಞಾನ, ತಂತ್ರಜ್ಞಾನ ಸಚಿವ ಎಂ.ಆರ್. ಸೀತಾರಾಂ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಚೇರಿಯಲ್ಲಿ ಇಂದು ಭೇಟಿ ಮಾಡಿದ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಸಚಿವರು ಈಗಾಗಲೇ 600 ಜನ ನಿವೇಶನ ಕೋರಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದು, ಲಾಟರಿ ಮೂಲಕ ಈಗಾಗಲೇ ಅರ್ಹರಿಗೆ ನಿವೇಶನ ಹಂಚಲಾಗಿದೆ ಎಂದು ತಿಳಿಸಿದರು.

ನಿವೇಶನ ಪಡೆದ ಅರ್ಹರು ತಮ್ಮ ಮನೆ ನಿರ್ಮಿಸಿಕೊಳ್ಳಲು ಮುಂದಾದಲ್ಲಿ ಸರ್ಕಾರ ನಾಲ್ಕು ಲಕ್ಷ ರೂಪಾಯಿಗಳನ್ನು ನೀಡಲಿದೆ ಇಲ್ಲದಿದ್ದಲ್ಲಿ ಅಷ್ಟೇ ಮೊತ್ತ ಖರ್ಚು ಮಾಡಿ ಸರ್ಕಾರವೇ ಮನೆ ನಿರ್ಮಿಸಿಕೊಡಲಾಗುವುದು ಎಂದು ತಿಳಿಸಿದ ಸಚಿವರು ದಿಡ್ಡಳ್ಳಿ ಸಂತ್ರಸ್ಥರು ನಾವು ಈಗಾಗಲೇ ಗುರ್ತಿಸಿರುವ ಸ್ಥಳದಲ್ಲಿ ಮನೆ ನಿರ್ಮಿಸಿಕೊಳ್ಳಲು ಮುಂದಾಗುತ್ತಿಲ್ಲ. ಅದಕ್ಕೆ ಅಲ್ಲಿನ ಸ್ಥಳೀಯ ಸಮಸ್ಯೆಗಳು ಕಾರಣ ನಾನು ಇದೇ ತಿಮಗಳು 14 ಮತ್ತು 15 ರಂದು ಕೊಡಗು ಜಿಲ್ಲೆಗೆ ಭೇಟಿ ನೀಡಲಿದ್ದು ಸಂತ್ರಸ್ಥರ ಮನವೊಲಿಸುವ ವಿಶ್ವಾಸ ವ್ಯಕ್ತಪಡಿಸಿದರು.

ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಹಣ ಆಯಾ ಹಣಕಾಸು ವರ್ಷದಲ್ಲೇ ಖರ್ಚು ಮಾಡಬೇಕು, ವಿಧಾನ ಸಭೆ ಹಾಗೂ ವಿಧಾನ ಪರಿಷತ್ತಿನ ಪ್ರತಿ ಸದಸ್ಯರಿಗೆ ವಾರ್ಷಿಕ 2 ಕೋಟಿ ರೂ.

ಹಣ ಬಿಡುಗಡೆ ಮಾಡಲಾಗುತ್ತಿದೆ ಎಂದ ಸಚಿವರು ಒಟ್ಟು ಕಳೆದ ಸಾಲಿನಲ್ಲಿ 600 ಕೋಟಿ ಹಣ ಬಿಡುಗಡೆ ಮಾಡಲಾಗಿದ್ದು ಸುಮಾರು 450 ಕೋಟಿ ರೂಪಾಯಿ ಖರ್ಚಾಗಿದೆ ಎಂದು ತಿಳಿದು ಬಂದಿದ್ದು ಜಿಲ್ಲಾಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆಯಲಾಗುವುದು ಎಂದು ಅವರು ತಿಳಿಸಿದರು.

ಕೆಪಿಪಿ/ಜೆಡಿ/ಕೆಎಂ

## ವಿಶ್ವ ಕನ್ನಡ ಸಮ್ಮೇಳನ ವಿಶೇಷಾಧಿಕಾರಿ ನೇಮಕ

**ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)**

ದಾವಣಗೆರೆಯಲ್ಲಿ ನಡೆಯಲಿರುವ ವಿಶ್ವ ಕನ್ನಡ ಸಮ್ಮೇಳನದ ಅಧಿಕಾರಯುಕ್ತ ವಿಶೇಷ ಅಧಿಕಾರಿಯವರಿಗೆ ನೆರವು ಮತ್ತು ಸಹಕಾರವನ್ನು ನೀಡುವ ಸಲುವಾಗಿ ಬೆಟಸೂರಮಠ, ನಿವೃತ್ತ ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ, ಇವರನ್ನು ಸಮನ್ವಯಾಧಿಕಾರಿಯನ್ನಾಗಿ ಹಾಗೂ ಕೆ.ಎ. ದಯಾನಂದ ಕೆ.ಎ.ಎಸ್. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಇವರನ್ನು ವಿಶೇಷ ಕರ್ತವ್ಯಾಧಿಕಾರಿಯನ್ನಾಗಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

## ಬೇಕರಿ ತರಬೇತಿ

**ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)**

**ಬೇಕರಿ ತರಬೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿದಾರರಿಗೆ ಉದ್ದಿಮೆ ಮತ್ತು ಗೃಹಣಿಯರಿಗಾಗಿ ಆಯೋಜಿಸಲಾಗಿದೆ.**

**ತರಬೇತಿಯು ದಿನಾಂಕ 8–5–2017 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಪ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು.**

**ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಯಾವುದೆ ವಿದ್ಯಾರ್ಹತೆ ಅವಶ್ಯಕತೆಯಿಲ್ಲ. ತಯಾರಿಕೆಗೆ ಬೇಕಾದ ಕಚ್ಚಾ ಪದಾರ್ಥಗಳನ್ನು ತರಬೇತಿ ಘಟಕದಲ್ಲೇ ಒದಗಿಸಲಾಗುವುದು. ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ**

**ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು –560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 23513370 ಮೂಲಕ ಕಛೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.**

# ರಾಷ್ಟ್ರಮಟ್ಟದ ವಿದ್ಯಾರ್ಥಿ ವೇತನ

**ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)**

ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ ಇವರು ಕೇಂದ್ರ ಸರ್ಕಾರದ ವತಿಯಿಂದ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ವಿಧ್ಯಾರ್ಥಿಗಳಿಗಾಗಿ ನೀಡುವ ರಾಷ್ಟ್ರಮಟ್ಟದ ವಿದ್ಯಾರ್ಥಿ ವೇತನಕ್ಕೆ 2015 ನೇ ಸಾಲಿನ ಅರ್ಹ ವಿಧ್ಯಾರ್ಥಿಗಳಿಗೆ ಪ್ರಥಮ ನವೀಕರಣದ ನಿಮಿತ್ತ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಈ ಹಿಂದೆ ತಿಳಿಸಲಾಗಿತ್ತು.

ಆದರೆ ಅನೇಕ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅಂಕಪಟ್ಟಿಗಳು ದೊರೆಯದ ಕಾರಣ ಹಾಗೂ ಮಾಹಿತಿಯ ಕೊರತೆಯ ಕಾರಣಗಳಿಂದಾಗಿ ಈ ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗಿರುವುದಿಲ್ಲ. ಅಂತಹ ವಿದ್ಯಾರ್ಥಿಗಳಿಂದ ಪುನ: ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿದೆ.

ವೆಬ್‌ಸೈಟ್http://pue.kar.nic.in=>>Scholarship=>>MHRD scholarship=>>MHRD Scholarship 2015 -I RENEWAL ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು (ಕಡ್ಡಾಯವಾಗಿ ಅರ್ಜಿ ಸಂಖ್ಯೆಯೊಂದಿಗೆ) ನಿಗಧಿತ ನಮೂನೆಯಲ್ಲಿ ದಿನಾಂಕ: 20–5–2017 ರೊಳಗಾಗಿ ಪ್ರಾಂಶುಪಾಲರಿಗೆ ನೀಡಲು ತಿಳಿಸಿದೆ.

ನಿಯಮಾನುಸಾರ ಅರ್ಜಿಯನ್ನು ಎಲ್ಲಾ ಧೃಢೀಕರಣಗಳೊಂದಿಗೆ ದಿನಾಂಕ 25–5–2017 ರೊಳಗಾಗಿ ಕೆಳಕಂಡ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ಅದರಂತೆ ಪ್ರಾಂಶುಪಾಲರುಗಳು ವಿದ್ಯಾರ್ಥಿಗಳಿಂದ ಬಂದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನಿಗಧಿತ ನಮೂನೆಯಲ್ಲಿ ದಿನಾಂಕ: 25–5–2017ರ ಒಳಗೆ MHRD SCHOLARSHIP 2015 - I RENEWAL The Nodal Officer, Room NO. 302, III Floor, MHRD Scholarship Section, Dept. of Pre-University Education, 18th Cross, Malleswaram, Bengaluru -560 012 Telephone 23311330 ವಿಳಾಸ ಕ್ಕೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ತಿಳಿಸಿದೆ.

ವಿದ್ಯಾರ್ಥಿಗಳು ಈ ಮೊದಲು ಪ್ರಥಮ ನವೀಕರಣದ ನಿಮಿತ್ತ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅವುಗಳನ್ನು ಪರಿಗಣಿಸಲಾಗುವುದಿಲ್ಲ. ವಿದ್ಯಾರ್ಥಿಗಳು ಪುನ: ಅರ್ಜಿಯನ್ನು ನಿಗಧಿತ ನಮೂನೆಯಲ್ಲಿ ಧೃಢೀಕರಣದೊಂದಿಗೆ ಸಲ್ಲಿಸುವುದು ಹಾಗೂ ಅರ್ಜಿಯ ನಕಲು ಪ್ರತಿಗಳನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳಲು ಪ್ರಕಟಣೆ ತಿಳಿಸಿದೆ.

# opening ceremony of 1st phase OORJA - CAPF U-19 Talent Hunt Tournament

**Bangalore, May 8 (Karnataka Information)**

Opening ceremony of 1st phase OORJA - CAPF U-19 Talent Hunt Tournament was held with great pomp and show at Sree Kanteerva Football stadium in Bangalore. Shri Subhash Chandra ,IAS Addl. Secretary Home Karnataka graced the occasion as Chief Guest PS Sandhu, IPS IG STC BSF Bangalore welcomed the Chief guest. After that Subhash Chandra IAS encouraged the teams with his brief address and emphasised the importance of football as sports . He declared the tournament open by releasing a bunch of tri-colour balloons. Total 16 teams comprising 8 each of boys and girls are participating in the tournament which comes from various parts of Karnataka and includes KVs, Clubs, IPSC, SAI and local schools. The tournament kicked off smoothly with the first match played between DYES Bengaluru Vs. St. Paul's Belagavi. Both teams displayed their skills and football acumen to the delight of spectators, which numbered more than 500. DYES Bengaluru outsmarted St. Paul's Belagavi by converting two opportunities into Goals and maintained the momentum to finish the match 2-0."

## Discussion on Dr. B.R. Ambedkar School of Economics

**Bangalore, May 8 (Karnataka Information)**

The National Statistical Commission headed by Dr. R.B. Burman would be visiting Bengaluru Dr. B.R. Ambedkar School of Economics on 10-5-2017 at 2-30 pm to have discussion regarding taking forward of the School of Economics. All persons interested on the subject may participate in the discussion, by giving advance intimation be e-mail. The e-mail address of the institution is basekarnataka@gmail.com. Sri Basavaraja Reddi, Minister for Higher Education S.V. Ranganath, Vice Chairman, Karnataka State Higher Education Council, Anum K. Pujari, Director of Bengaluru Dr. B.R. Ambedkar School of Economics would also participate in the discussion.

## ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಮುನ್ನಡೆಸುವ ವಿಷಯ ಕುರಿತು ಸಭೆ

**ಬೆಂಗಳೂರು, ಮೇ 8 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಅಂಕಿ ಅಂಶಗಳ ಆಯೋಗದ ಮುಖ್ಯಸ್ಥ ಡಾ: ಆರ್.ಬಿ. ಬರ್ಮನ್ ಅವರು ಬೆಂಗಳೂರಿನಲ್ಲಿ ರಾಜ್ಯ ಸರ್ಕಾರ ನಿರ್ಮಿಸುತ್ತಿರುವ ಬೆಂಗಳೂರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ್ನು ಮುನ್ನಡೆಸುವ ಕುರಿತ ವಿಚಾರಗಳನ್ನು ಚರ್ಚಿಸಲು ದಿನಾಂಕ: 10–5–2017 ರಂದು ಮಧ್ಯಾಹ್ನ 2–30 ಗಂಟೆಗೆ ಸಭೆ ಕರೆದಿದ್ದಾರೆ.

ಸಭೆಯಲ್ಲಿ ಪಾಲ್ಗೊಳ್ಳುವ ಆಸಕ್ತಿಯುಳ್ಳವರು basekarnataka@gmai.com ಗೆ ಮೇಲ್ ಮಾಡಿ ನೋಂದಾಯಿಸಿಕೊಂಡು ಸಭೆಯಲ್ಲಿ ಭಾಗವಹಿಸಬಹುದಾಗಿದೆ. ಸಭೆಯಲ್ಲಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಅಧ್ಯಕ್ಷ ಎಸ್.ವಿ. ರಂಗನಾಥ್, ಅನೂಪ್ ಕೆ. ಪೂಜಾರಿ, ನಿರ್ದೇಶಕರು ಬೆಂಗಳೂರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಇವರುಗಳು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.